**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂಃ ನ್ಯಾಯಾಲಯಃ ನರಸಿಂಹರಾಜಪುರ**

**ಸಿಸಿಃನಂಃ 519/2024**

**ಸಿ.ಡಬ್ಲ್ಯೂಃ 2**
**ಪಿ.ಡಬ್ಲೂಃ 1**

**ಸಾಕ್ಷಿದಾರರ ಹೆಸರು ಃ ಎಂ ಎಂ ಮ್ಯಾಥ್ಯು**
**ತಂದೆಯ ಹೆಸರು ಃ ಎಂ ಎಂ ಮಾಥಾಯ್**
**ವಯಸ್ಸು ಃ 56 ವರ್ಷ**
**ಉದ್ಯೋಗ ಃ ಕೃಷಿ**
**ವಾಸಸ್ಥಳ ಃ ಬಸರಗಳಲೆ, ನ ರಾ ಪುರ ತಾಲ್ಲೂಕು**

**ದಿನಾಂಕಃ 24.02.2026 ರಂದು ಪ್ರಮಾಣವಚನ ಬೋಧಿಸಲಾಯಿತು.**

**ಃಃ ಮುಖ್ಯ ವಿಚಾರಣೆಃ ಮಾನ್ಯಃ ಎಪಿಪಿಯವರಿಂದಃ**

ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ತಾಲ್ಲೂಕು ಕಚೇರಿಗೆ ಹೋಗುವ ಸಂದರ್ಭದಲ್ಲಿ ಅಬಕಾರಿ ಇಲಾಖೆಯ ಪೊಲೀಸರು ಒಂದು ದಾಖಲೆಗೆ ಸಹಿ ಮಾಡುವಂತೆ ನನಗೆ ಹೇಳಿದರು ಆ ಕಾರಣ ನಾನು ಸದರಿ ದಾಖಲೆಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ನನಗೆ ತಿಳಿದಿರುವುದಿಲ್ಲ.

ಸಾಕ್ಷಿಗೆ ಕೃತ್ಯ ನಡೆದ ಸ್ಥಳ ಮಹಜರ್ ನ ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಸದರಿ ನಿಪಿ-1 ರಲ್ಲಿ ಏನು ವಿಚಾರ ಬರೆಯಲಾಗಿದೆ ಎಂದು ತನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಅಬಕಾರಿ ಪೊಲೀಸರು ನನಗೆ ನೋಟೀಸನ್ನು ಜಾರಿ ಮಾಡಿರುವುದಿಲ್ಲ. ಸಾಕ್ಷಿಗೆ ಸದರಿ ನೋಟೀಸನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ-2 ಮತ್ತು ತನ್ನ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸದರಿ ನಿಪಿ-2 ರಲ್ಲಿ ಏನು ವಿಚಾರ ಬರೆದಿದೆ ಎಂದು ತನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನಾನು ಅಬಕಾರಿ ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ಈ ಪ್ರಕರಣದಲ್ಲಿ ನೀಡಿರುವುದಿಲ್ಲ. ನ್ಯಾಯಾಲಯದ ಮುಂದೆ ಇರುವ 90 ಮಿಲಿಯ 40 ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿಯ ಟೆಟ್ರಾ ಪ್ಯಾಕೆಟ್

ಗಳನ್ನು ನಾನು ಈ ಹಿಂದೆ ನೋಡಿರುವುದಿಲ್ಲ. ಸದರಿ 90 ಮಿಲಿಯ 40 ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿಯ ಟೆಟ್ರಾ ಪ್ಯಾಕೆಟ್ ಗಳನ್ನು ಶೇಖರಿಸಿಟ್ಟಿದ್ದ ಹಳದಿ ಬಣ್ಣದ ಪ್ಲಾಸ್ಟಿಕ್ ಚೀಲವನ್ನು ಸಹ ನಾನು ಈ ಹಿಂದೆ ನೋಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ ಅಂತೆಯೇ ಪರಿಗಣಿಸಿ ಅನುಮತಿ ನೀಡಲಾಯಿತು)

**ಃಃಪಾಟೀ ಸವಾಲುಃ ಮಾನ್ಯ ಎಪಿಪಿಯವರಿಂದಃಃ**

ದಿನಾಂಕಃ 5.4.2024 ರಂದು ಮಧ್ಯಾಹ್ನ 12.30 ಗಂಟೆ ಸಮಯದಲ್ಲಿ ನ ರಾ ಪುರ ತಾಲ್ಲೂಕು ಬಿ ಹೆಚ್ ಕೈಮರ ಸರ್ಕಲ್ ನ ಬಲಭಾಗದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ 2024 ರ ಲೋಕ ಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಅಬಕಾರಿ ನಿರೀಕ್ಷಕರು ಹಾಗೂ ಸಿಬ್ಬಂದಿಗಳು ಇಲಾಖಾ ವಾಹನ ಸಂಃ ಕೆಎ-18-ಜಿ-89209 ವಾಹನದಲ್ಲಿ ನ ರಾ ಪುರ ಪಟ್ಟಣದಲ್ಲಿ ಗಸ್ತು ಕರ್ತವ್ಯದಲ್ಲಿದ್ದಾಗ ನ ರಾ ಪುರ ಪಟ್ಟಣದ ದೀಪ್ತಿ ಸರ್ಕಲ್ ಬಳಿ ಮಧ್ಯಾಹ್ನ 12.15 ಗಂಟೆ ಸಮಯದಲ್ಲಿ ಒಬ್ಬ ವ್ಯಕ್ತಿ ಬಿ ಹೆಚ್ ಕೈಮರ ಸರ್ಕಲ್ ಹತ್ತಿರ ಒಂದು ಕೈಚೀಲದಲ್ಲಿ ಅಕ್ರಮವಾಗಿ ಮದ್ಯವನ್ನು ಮಾರಾಟ ಮಾಡುತ್ತಿರುವುದಾಗಿ ಖಚಿತ ಮಾಹಿತಿ ಬಂದ ಮೇರೆಗೆ ಚಾಸಾ-1 ರವರು ನನ್ನನ್ನು ಮತ್ತು ಚಾಸಾ-3 ರವರನ್ನು ಪಂಚ ಸಾಕ್ಷಿದಾರರಾಗಿ ಸಹಕರಿಸಲು ಕೋರಿ ನೋಟೀಸು ಜಾರಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ತದನಂತರ ಚಾಸಾ-1 ರವರು ಸ್ಥಳದಲ್ಲಿಯೇ ಶೋಧನಾ ಸಮುಚ್ಚಿತ್ತ ವಾರೆಂಟನ್ನು ತಯಾರು ಮಾಡಿಕೊಂಡು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಒಬ್ಬ ವ್ಯಕ್ತಿಯ ಮೇಲೆ ದಾಳಿ ನಡೆಸಿ ಸದರಿ ವ್ಯಕ್ತಿಯ ಶೋಧನೆ ಮಾಡಲಾಗಿ ಆತನ ಬಳಿ ಇದ್ದ ಒಂದು ಕೈ ಚೀಲವನ್ನು ಪರಿಶೀಲಿಸಲಾಗಿ ಸದರಿ ಕೈ ಚೀಲದಲ್ಲಿ 90 ಮಿಲಿಯ 40 ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿಯ ಟೆಟ್ರಾ ಪ್ಯಾಕೆಟ್ ಗಳು ಇರುವುದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ. ಸದರಿ ಮದ್ಯದ ಬಗ್ಗೆ ಸದರಿ ವ್ಯಕ್ತಿಯನ್ನು ಕೇಳಲಾಗಿ ಸದರಿ ವ್ಯಕ್ತಿಯು ಸದರಿ ಮದ್ಯದ ಬಗೆಗಿನ ಯಾವುದೇ ದಾಖಲೆಯನ್ನು ಒದಗಿಸಿರುವುದಿಲ್ಲ ಎಂದರೆ ಸರಿಯಲ್ಲ. ತದನಂತರ ಚಾಸಾ-1 ರವರು ನಮ್ಮ ಸಮಕ್ಷಮ ಸದರಿ ವ್ಯಕ್ತಿಯ ಹೆಸರು,ವಿಳಾಸ ಕೇಳಲಾಗಿ ಈ ದಿನ ನ್ಯಾಯಾಲಯದ ಮುಂದಿರುವ ಆರೋಪಿತರೇ ಸದರಿ ವ್ಯಕ್ತಿಯಾಗಿ ತಮ್ಮ ಬಗೆಗಿನ ವಿಳಾಸ ಮತ್ತು ವಿವರಣೆಯನ್ನು ನೀಡಿರುತ್ತಾರೆಂದರೆ ಸರಿಯಲ್ಲ. ಸದರಿ ಆರೋಪಿತರಿಂದ ಅಮಾನತುಪಡಿಸಿಕೊಂಡ 90 ಮಿಲಿಯ 40 ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿಯ ಟೆಟ್ರಾ ಪ್ಯಾಕೆಟ್ ಗಳನ್ನು ಸ್ಥಳದಲ್ಲಿಯೇ ಅಮಾನತು ಮಹಜರನ್ನು ಮ 12.30 ರಿಂದ 1.30 ರವರೆಗೂ ತಯಾರು ಮಾಡಿರುತ್ತಾರೆಂದರೆ ಸರಿಯಲ್ಲ. ಸದರಿ ಅಮಾನತು

ಪಂಚನಾಮೆಗೆ ಸೀಲ್ ನಂಃ 353 ಎಂದು ಮತ್ತು ಸದರಿ ಹಳದಿ ಬಣ್ಣದ ಚೀಲಕ್ಕೆ ಚಾಸಾ-1 ಹಾಗೂ ನಮ್ಮ ಸಹಿಗಳುಳ್ಳ ಚೀಟಿಯನ್ನು ಅಂಟಿಸಿರುತ್ತಾರೆ ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ನನಗೆ ಸಾಕ್ಷಿದಾರನಾಗಿ ಸಹಕರಿಸುವಂತೆ ನಿಪಿ-2 ನ್ನು ನೀಡಿರುತ್ತಾರೆಂದರೆ ಸರಿಯಲ್ಲ. ಸ್ಥಳದಲ್ಲಿಯೇ ತಯಾರಿಸಿದ ಅಮಾನತು ಪಂಚನಾಮೆಗೆ ನಾನು ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ನಾನು ಆರೋಪಿತರೊಂದಿಗೆ ಶರಿಕ್ ಆಗಿ ಈ ದಿನ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಈಗ ಸಾಕ್ಷಿಗೆ ಸದರಿ ದಿನದಂದು ನೀಡಿದ ಹೇಳಿಕೆಯ ಭಾಗಾಂಶವನ್ನು ಓದಿ ಹೇಳಲಾಯಿತು. ಹೇಳಿಕೆಯ ಭಾಗಾಂಶ " ದಿನಾಂಕಃ 5.4.2024 ರಂದು --------------------- ಮುಕ್ತಾಯಗೊಳಿಸಲಾಯಿತು.” ಸದರಿ ಹೇಳಿಕೆಯನ್ನು ಸಾಕ್ಷಿ ಒಪ್ಪಿರುವುದಿಲ್ಲ. ಹೇಳಿಕೆಯ ಭಾಗಾಂಶವನ್ನು ನಿಪಿ-3 ಎಂದು ಗುರುತಿಸಲಾಯಿತು.

**ಃಪಾಟೀ ಸವಾಲು ಆರೋಪಿ ಪರ ಶ್ರೀ. ಎನ್ ವಿ ಎಸ್ ವಕೀಲರಿಂದಃಃಇಲ್ಲಾಃಃ**

**ಃಃ ಮರು ವಿಚಾರಣೆ ಇಲ್ಲಃಃ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇ ಎ ಒ**

**ಪ್ರ.ದ.ನ್ಯಾದಂಃ ನ.ರಾ.ಪುರ.**

**ಸಾಕ್ಷಿ ಸಹಿಃ**